**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:05-04-2021.

## ಆದೇಶ

1. ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:23.03.2021ರಲ್ಲಿ ಕೋವಿಡ್-19 ಸೋಂಕು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:30.04.2021ರವರೆಗೆ ಜಾರಿಯಲ್ಲಿರುತ್ತದೆ. ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:29.03.2021ರಲ್ಲಿ ಕೋವಿಡ್-19 ವೈರಾಣು ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:30.04.2021ರ ವರೆಗೆ ಜಾರಿಯಲ್ಲಿರುತ್ತದೆ. ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪ್ರತ್ಯೇಕವಾಗಿ HFW 90 ACS 2021 ದಿನಾಂಕ:02.04.2021 ಮತ್ತು ದಿನಾಂಕ:04.04.2021ರ ತಿದ್ದುಪಡಿ ಆದೇಶದಲ್ಲಿ ಪ್ರಮಾಣಿತ ಕಾರ್ಯವಿಧಾನಗಳನ್ನು ಹೊರಡಿಸಿದೆ.

2. ಪ್ರಸ್ತುತ ರಾಜ್ಯದಲ್ಲಿ ಕೋವಿಡ್-19 ಸೋಂಕು ಹರಡುವಿಕೆ ಉಲ್ಬಣವಾಗಿದ್ದು, ನಿಯಂತ್ರಣ ಕಾರ್ಯ ಅತ್ಯವಶ್ಯಕವಾಗಿದೆ.

3. ಅದರಂತೆ, ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಪರೀಕ್ಷೆ, ಸಂಪರ್ಕ ಪತ್ತೆ, ದಿಗ್ಬಂಧನ ಮತ್ತು ಕೋವಿಡ್ ಸಮುಚಿತ ವರ್ತನೆ ಹಾಗೂ ಲಸಿಕೆ ಕಾರ್ಯಕ್ರಮಗಳಿಗೆ ಸಿಬ್ಬಂದಿಗಳ ಸೇವೆ ಅವಶ್ಯಕವಿದ್ದು, ಸುಸೂತ್ರ ಕಾರ್ಯ ನಿರ್ವಹಣೆಗಾಗಿ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್2020 ದಿನಾಂಕ:14.04.2020, ದಿ:06.07.2020, ದಿ:23.07.2020 ಮತ್ತು ದಿ:27.07.2020ರ ಆದೇಶಗಳನ್ನು ಮುಂದುವರೆಸುತ್ತ ವಿಪತ್ತು ನಿರ್ವಹಣಾ ಕಾಯ್ದೆ, ೨೦೦೫ರ ಸೆಕ್ಷನ್ ೬೯ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸೆಕ್ಷನ್ 22ರ ಸಬ್‌ಸೆಕ್ಷನ್ (2) ಕ್ಲಾಸ್ (h) ಮತ್ತು ಸೆಕ್ಷನ್ 24ರ ಕ್ಲಾಸ್(a) (b) (f) (h) (j) (k) ಮತ್ತು (l)ರಡಿಯಲ್ಲಿನ ಅಧಿಕಾರ ಮತ್ತು ಪ್ರಕಾರ್ಯಗಳನ್ನು ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾದ ಈ ಕೆಳಗೆ ಸಹಿ ಮಾಡಿರುವ ನಾನು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರು, ವಿಶೇಷ ಆಯುಕ್ತರು, ಹೆಚ್ಚುವರಿ ಆಯುಕ್ತರು ಮತ್ತು ಜಂಟಿ ಆಯುಕ್ತರು ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧಿಕಾರಗಳು ಮತ್ತು ಪ್ರಕಾರ್ಯಗಳನ್ನು ಈ ಮೂಲಕ ಪ್ರತ್ಯಾಯೋಜಿಸಿರುತ್ತೇನೆ. ಈ ಅಧಿಕಾರ ಪ್ರತ್ಯಾಯೋಜನೆಯನುಸಾರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ತನ್ನ ಕಾರ್ಯ ವ್ಯಾಪ್ತಿಯಲ್ಲಿ 55 ವರ್ಷದ ಕೆಳಪಟ್ಟ ವಯೋಮಾನದ ಸಿಬ್ಬಂದಿಗಳ ಸಂಪನ್ಮೂಲವನ್ನು ಯಾವುದೇ ಇಲಾಖೆಗಳಿಂದ ಅಗತ್ಯಾನುಸಾರ ಪಡೆಯತಕ್ಕದ್ದು.

4. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೊರತುಪಡಿಸಿ ಇನ್ನುಳಿದ ಜಿಲ್ಲೆಗಳಿಗೆ ವಿಪತ್ತು ನಿರ್ವಹಣಾ ಕಾಯ್ದೆ, ೨೦೦೫ರ ಸೆಕ್ಷನ್ 34ರಲ್ಲಿ ಈಗಾಗಲೇ ಅಧಿಕಾರ ಪ್ರತ್ಯಾಯೋಜಿಸಿರುವಂತೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ 55 ವರ್ಷದ ಕೆಳಪಟ್ಟ ವಯೋಮಾನದ ಸಿಬ್ಬಂದಿಗಳ ಸಂಪನ್ಮೂಲವನ್ನು ಯಾವುದೇ ಇಲಾಖೆಗಳಿಂದ ಅಗತ್ಯಾನುಸಾರ ಪಡೆದು ಕಾಯ್ದೆಯನುಸಾರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**(ಪಿ. ರವಿ ಕುಮಾರ್)**
ಮುಖ್ಯ ಕಾರ್ಯದರ್ಶಿ ಹಾಗೂ
ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.